ಕರ್ನಾಟಕ ಸರ್ಕಾರ
ಆಹಾರ ಸುರಕ್ಷತೆ ಆಯುಕ್ತರ ಕಾರ್ಯಾಲಯ
ಸಾರ್ವಜನಿಕ ಆರೋಗ್ಯ ಸಂಸ್ಥೆ ಶೇಷಾದ್ರಿ ರಸ್ತೆ, ಬೆಂಗಳೂರು-560 001

ಸಂಖ್ಯೆ: ಸಾಆಸಂ/ಎಫ್‌ಎಸ್‌ಎಸ್‌ಎ/ಅಸೂ/01/2013-14 ದಿನಾಂಕ: 30-05-2013

**ಅಧಿಸೂಚನೆ**

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ-2006 (ಕೇಂದ್ರ ಕಾಯ್ದೆ 34/ 2006) ರ ಸೆಕ್ಷನ್ 92 ರ ಸಬ್ ಸೆಕ್ಷನ್ (2) ರ ಕ್ಲಾಸ್ (1) ರ ಅಡಿಯಲ್ಲಿ ಸೆಕ್ಷನ್ 26 ರನ್ನು ಓದಿಕೊಂಡಂತೆ ಪ್ರದತ್ತವಾದ ಅಧಿಕಾರದ ಮೇರೆಗೆ ಭಾರತ ಸರ್ಕಾರದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ನಿಷೇಧ ಮತ್ತು ಮಾರಾಟ ನಿರ್ಬಂಧ) ನಿಬಂಧನೆಗಳು, 2011 ರನ್ನು ರಚಿಸಿದ್ದು, ನಿಬಂಧನೆ 2.3.4 ರಲ್ಲಿ ತಂಬಾಕು ಮತ್ತು ನಿಕೋಟಿನ್ ಘಟಕಾಂಶಗಳನ್ನೊಳಗೊಂಡ ಆಹಾರ ಪದಾರ್ಥಗಳನ್ನು ನಿಷೇದಿಸಿದೆ. ಗುಟ್ಕಾ ಮತ್ತು ಪಾನ್ ಮಸಾಲಗಳು, ತಂಬಾಕು ಮತ್ತು ನಿಕೋಟಿನ್ ಘಟಕಾಂಶಗಳನ್ನು ಒಳಗೊಂಡ ಆಹಾರ ಪದಾರ್ಥಗಳಾಗಿವೆ. ಆದುದರಿಂದ ಕರ್ನಾಟಕ ರಾಜ್ಯಾದಾದ್ಯಂತ ತಂಬಾಕು ಮತ್ತು ನಿಕೋಟಿನ್ ಘಟಕಾಂಶಗಳನ್ನೊಳಗೊಂಡ ಗುಟ್ಕಾ ಮತ್ತು ಪಾನ್ ಮಸಾಲ ಆಹಾರ ಪದಾರ್ಥಗಳನ್ನು ನಿಷೇಧಿಸಬೇಕಾಗಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯಲ್ಲಿನ ಉಪಬಂಧಗಳನ್ನು ಮತ್ತು ಅದರಡಿಯಲ್ಲಿ ರಚಿತವಾಗಿರುವ ನಿಯಮಾವಳಿಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕರ್ನಾಟಕ ರಾಜ್ಯವು ಆಹಾರ ಸುರಕ್ಷತಾ ಆಯುಕ್ತರನ್ನು ನೇಮಿಸಿದೆ.

ಆದುದರಿಂದ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ನಿಷೇಧ ಮತ್ತು ಮಾರಾಟ ನಿರ್ಬಂಧ) ನಿಬಂಧನೆಗಳು, 2011 ರ ನಿಬಂಧನೆ 2.3.4 ರ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ತಂಬಾಕು ಮತ್ತು ನಿಕೋಟಿನ್ ಘಟಕಾಂಶಗಳನ್ನೊಳಗೊಂಡ ಗುಟ್ಕಾ ಮತ್ತು ಪಾನ್‌ಮಸಾಲ ಹಾಗೂ ಇತರೆ ಯಾವುದೇ ಹೆಸರಿನಲ್ಲಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಗುಟ್ಕಾ ಮತ್ತು ಪಾನ್‌ಮಸಾಲ ಪದಾರ್ಥಗಳ ತಯಾರಿಕೆ, ಸಂಗ್ರಹಣೆ, ಮಾರಾಟ ಹಾಗೂ ವಿತರಣೆಯನ್ನು ಸಾರ್ವಜನಿಕರ ಆರೋಗ್ಯದ ಹಿತ ದೃಷ್ಟಿಯಿಂದ ಸಂಪೂರ್ಣವಾಗಿ ನಿಷೇಧಿಸಿದೆ.

VBpatil
(ವಿ ಬಿ ಪಾಟೀಲ್, ಐ.ಎ.ಎಸ್)
ರಾಜ್ಯ ಆಹಾರ ಸುರಕ್ಷತಾ ಆಯುಕ್ತರು

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಇದರ 500 ಪ್ರತಿಗಳನ್ನು ಆಹಾರ ಸುರಕ್ಷತೆ ಆಯುಕ್ತರು, ಸಾರ್ವಜನಿಕ ಆರೋಗ್ಯ ಸಂಸ್ಥೆ, ಶೇಷಾದ್ರಿ ರಸ್ತೆ, ಬೆಂಗಳೂರು-560 001, ಇವರಿಗೆ ಸರಬರಾಜು ಮಾಡುವುದು.

**ಪ್ರತಿಗಳು:**

1. ಘನತೆವೆತ್ತ ಕರ್ನಾಟಕ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜ ಭವನ, ಬೆಂಗಳೂರು.
2. ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಆರೋಗ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

5. ಕರ್ನಾಟಕ ಸರ್ಕಾರದ ಎಲ್ಲಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು-560 009.
7. ಸಹ ನಿರ್ದೇಶಕರು (ಎಫ್‌ಎಸ್‌ಎಸ್‌ಎ), ಸಾರ್ವಜನಿಕ ಆರೋಗ್ಯ ಸಂಸ್ಥೆ, ಶೇಷಾದ್ರಿ ರಸ್ತೆ, ಬೆಂಗಳೂರು-01.
8. ಉಪ ನಿರ್ದೇಶಕರು (ಸ್ಕ್ವಾಡ್), ಸಾರ್ವಜನಿಕ ಆರೋಗ್ಯ ಸಂಸ್ಥೆ, ಶೇಷಾದ್ರಿ ರಸ್ತೆ, ಬೆಂಗಳೂರು-01.
9. ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಆರೋಗ್ಯ ಸಂಸ್ಥೆ, ಶೇಷಾದ್ರಿ ರಸ್ತೆ, ಬೆಂಗಳೂರು-01.
10. ಎಲ್ಲಾ ಜಿಲ್ಲೆಗಳ ನ್ಯಾಯ ನಿರ್ಣಯ ಅಧಿಕಾರಿಗಳು.
11. ಎಲ್ಲಾ ಜಿಲ್ಲೆಗಳ ಅಂಕಿತ ಅಧಿಕಾರಿಗಳು.